ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ.

ಸಿ.ಸಿ.ನಂಃ 4527/2021 ಸಿ.ಡಬ್ಲ್ಯೂ –೩ ಪಿ.ಡಬ್ಲ್ಯೂ -3

| | | |
|---|---|---|
| ಹೆಸರು | ಃ | ಅಶೋಕ |
| ತಂದೆ | ಃ | ಪರಸಪ್ಪ ಹಾದಿಮನಿ |
| ವಯಸ್ಸು | ಃ | ೩೭ ವರ್ಷ |
| ಉದ್ಯೋಗ | : | ಕೂಲಿಕೆಲಸ |
| ವಾಸಸ್ಥಳ | ಃ | ವೈಜಾಪುರ |

ದಿನಾಂಕಃ೧೨.೦೨.೨೦೨೪
ಸತ್ಯ ಪ್ರತಿಜ್ಞೆಯ ಮೇರೆಗೆ

---

**ಮುಖ್ಯ ವಿಚಾರಣೆ ಮಾನ್ಯ ಸಸಅ ಅವರಿಂದ**

ಆರೋಪಿತರ ಪರಿಚಯ ಇರುತ್ತದೆ. ಚಾಸಾ-೧ ೨, ೪ ರಿಂದ ೧೩ ರವರ ಪರಿಚಯ ಇರುತ್ತದೆ.

ದಿ.26.12.2019 ರಂದು ಪೋಲಿಸರು ನನ್ನನ್ನು ಕರೆದು ಕಳ್ಳತನವಾದ ಸ್ಥಳದಲ್ಲಿ ಪಂಚನಾಮೆ ಜರುಗಿಸಿ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ಸಾಕ್ಷಿಯು 7ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸಹಿಯನ್ನು ನಿಪಿ-೭(ಬಿ)ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು)

**ಪಾಟೀ ಸವಾಲು ಃ ಸ.ಸ.ಅ. ವಕೀಲರಿಂದ.**

ಪಂಚನಾಮೆ ಕಾಲಕ್ಕೆ ಜಾಗವನ್ನು ಚಾಸಅ-೧ ರವರು ತೋರಿಸಿರುತ್ತಾರೆ. ಪೋಲಿಸರು ನನ್ನ ಮತ್ತು ಚಾಸಾ-೨ ರವರ ಸಮಕ್ಷಮ ಪಂಚನಾಮೆಯ ಗುರುತಿಸಿ ಭಾವಚಿತ್ರಗಳನ್ನು ತೆಗೆದುಕೊಂಡಿರುತ್ತಾರೆ ಎಂಧರೆ ಸರಿ. ಸಾಕ್ಷಿ ನಿಪಿ-೪ ಮತ್ತು ೫ ರಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಬಿ.ಐ.ಎಸ್. ವಕೀಲರಿಂದ**

ಪೋಲಿಸರು ನನ್ನನ್ನು ಕರೆದಾಗ ನಾನು ಮನೆಯಲ್ಲಿ ಇದ್ದೆವು. ಪೋಲಿಸರು ಹೇಳಿದ ಮೇರೆಗೆ ಪಂಚನಾಮೆಗೆ ಸಹಿ ಮಾಡಿರುತ್ತೇನೆ ಎಂಧರೆ ಸರಿ. ಪಂಚನಾಮೆಯಲ್ಲಿ ಏನು ಬರೆದಿದ್ದಾರೆ ಏನು ಇಲ್ಲ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಪೋಲಿಸರು ಭಾವಚಿತ್ರ ತೆಗೆದುಕೊಳ್ಳುವುದಿದೆ ಬಾ ಎಂದು ಕರೆದಾಗ ನಾನು ಹೋಗಿ ನಿಂತಿರುತ್ತೇನೆ ಎಂದರೆ ಸರಿ.

**ಮರುವಿಚಾರಣೆಃ-** ಇರುವುದಿಲ್ಲ.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಆಳಂದ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ.

ಸಿ.ಸಿ.ನಂಃ 4527/2021 ಸಿ.ಡಬ್ಲ್ಯೂ –2 ಪಿ.ಡಬ್ಲ್ಯೂ -2

| | | |
|---|---|---|
| ಹೆಸರು | ಃ | ಶ್ರೀಕಾಂತ |
| ತಂದೆ | ಃ | ಬಾಬುರಾವ |
| ವಯಸ್ಸು | ಃ | ೩೪ ವರ್ಷ |
| ಉದ್ಯೋಗ | : | ಖಾಸಗಿ ಕೆಲಸ |
| ವಾಸಸ್ಥಳ | ಃ | ವೈಜಾಪುರ |

ದಿನಾಂಕಃ೧೨.೦೨.೨೦೨೪

ಸತ್ಯ ಪ್ರತಿಜ್ಞೆಯ ಮೇರೆಗೆ

---

**ಮುಖ್ಯ ವಿಚಾರಣೆ ಮಾನ್ಯ ಸಸಅ ಅವರಿಂದ**

ಆರೋಪಿತರ ಪರಿಚಯ ಇರುತ್ತದೆ. ಚಾಸಾ-೧ ೨, ೪ ರಿಂದ ೧೪ ರವರ ಪರಿಚಯ ಇರುತ್ತದೆ.

ದಿ.26.12.2019 ರಂದು ಪೋಲಿಸರು ಚಾಸಾ-೧ ರವರ ಮನೆಗೆ ಬಂದು ಪಂಚನಾಮೆಯನ್ನು ಜರುಗಿಸಿ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ. ಪಂಚನಾಮೆ ಕಾಲಕ್ಕೆ ಮತ್ತು ಚಾಸಾ-೩ ರವರು ಹಾಜರಿದ್ದೆವು. ಸಾಕ್ಷಿಯು ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಪಂಚನಾಮೆಯನ್ನು ನಿಪಿ-೭ ಎಂದು ಸಹಿಯನ್ನು ನಿಪಿ-೭(ಎ)ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-೪ ಮತ್ತು ೫ ರಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು)

**ಪಾಟೀ ಸವಾಲು ಃ ಸ.ಸ.ಅ. ವಕೀಲರಿಂದ.**

ದಿ 03.03.2021 ರಂದು ನ್ಯಾಯಾಲಯದ ಆದೇಶದ ಪ್ರಕಾರ ಜಪ್ತಿಪಡಿಸಿಕೊಂಡ ಮುದ್ದೇ ಮಾಲುಗಳನ್ನು ಬಿಡುಗಡೆ ಮಾಡುವ ಕಾಲಕ್ಕೆ ಪಂಚನಾಮೆಯನ್ನು ಜರುಗಿಸಿ ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿ. ಸಾಕ್ಷಿಯು ಸದರಿ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಪಂಚನಾಮೆಯನ್ನು ನಿಪಿ-೮ ಎಂದು ಸಹಿಯನ್ನು ನಿಪಿ-೮(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಬಿ.ಐ.ಎಸ್. ವಕೀಲರಿಂದ**

ನಾನು ಊರಲ್ಲಿ ಇದ್ದಾಗ ಪೋಲಿಸರು ನನ್ನನ್ನು ಕರೆದಿರುತ್ತಾರೆ. ಪಂಚನಾಮೆಯಲ್ಲಿ ಬರೆದ ವಿಷಯ ನನಗೆ ಗೊತ್ತಿಲ್ಲ, ಪೋಲಿಸರು ಹೇಳಿದ ಮೇರೆಗೆ ಸಹಿ ಮಾಡಿರುತ್ತೇನೆ ಎಂಧರೆ ಸರಿ. ನಂತರ ಪೋಲಿಸರು ನನ್ನನ್ನು ಠಾಣೆಗೆ ಕರೆಯಿಸಿ ನನ್ನ ಸಮಕ್ಷಮ ನಿಪಿ-ಅನ್ನು ತಯಾರಿಸಿ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂಧರೆ ಸರಿ ಅಲ್ಲ. ಘಟನೆಯ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ ಎಂದರೆ ಸರಿ.

ಪಂಚನಾಮೆಯಲ್ಲಿ ಬರೆದ ವಿಷಯ ನನಗೆ ಏನೂ ಗೊತ್ತಿಲ್ಲ ಎಂದರೆ ಸರಿ. ಚಾಸಾ-೧ ರವರ ಮಾತನ್ನು ಕೇಳಿ, ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂಧರೆ ಸರಿ ಅಲ್ಲ.

**ಮರುವಿಚಾರಣೆಃ-** ಇರುವುದಿಲ್ಲ.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಆಳಂದ